# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರಾಮನಗರ

**ಅಧಿಸೂಚನೆ ಸಂಖ್ಯೆ: 428 /2024, ದಿನಾಂಕ: 05.07.2024**

**ವಿಷಯ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಅರೆಕಾಲಿಕ ಕಾನೂನು ಸ್ವಯಂಸೇವಕರ ನೇಮಕಾತಿ ಬಗ್ಗೆ, ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.

**ಉಲ್ಲೇಖ:** 1) ಕರಾಕಾಸೇಪ್ರಾ, ಬೆಂಗಳೂರು ರವರ ಪತ್ರ ಸಂ: 07/ಪಿ.ಎಲ್.ವಿ/2023/779-2024, ದಿನಾಂಕ:26.06.2024.
2) ಅರೆಕಾಲಿಕ ಕಾನೂನು ಸ್ವಯಂಸೇವಕರ ಯೋಜನೆ ನಿಯಮಗಳು,
3) ಈ ಕಛೇರಿ ಟಿಪ್ಪಣಿ ಮತ್ತು ಅದರ ಮೇಲಿನ ಆದೇಶ.

* * * * *

ಉಲ್ಲೇಖಿತ ನಿಯಮ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪತ್ರದನ್ವಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ / ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ವಿವಿಧ ರೀತಿಯ ಸಂಸ್ಥೆಗಳಿಗೆ ಕಾನೂನು ನೆರವು / ಸೇವೆಗಳನ್ನು ನೀಡುವ ಸಲುವಾಗಿ ಅರೆಕಾಲಿಕ ಕಾನೂನು ಸ್ವಯಂ ಸೇವಕರನ್ನು ಈ ಕೆಳಕಂಡಂತೆ ಆಯ್ಕೆ ಮಾಡಬೇಕಾಗಿರುತ್ತದೆ.

ಶಿಕ್ಷಕರು (ನಿವೃತ್ತ ಶಿಕ್ಷಕರು ಸೇರಿ), ನಿವೃತ್ತ ಸರ್ಕಾರಿ ನೌಕರರು ಮತ್ತು ಹಿರಿಯ ನಾಗರೀಕರು, ಎಂ.ಎಸ್.ಡಬ್ಲ್ಯೂ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು, ವಿದ್ಯಾರ್ಥಿಗಳು, ಕಾನೂನು ವಿದ್ಯಾರ್ಥಿಗಳು (ವಕೀಲರಾಗಿ ನೋಂದಣಿಯಾಗುವವರೆವಿಗೂ) ರಾಜಕೀಯವಲ್ಲದ ಸಂಘಗಳ ಸದಸ್ಯರು, ಸೇವಾ ಮನೋಭಾವ ಇರುವ ಸರ್ಕಾರೇತರ ಸಂಘ ಸಂಸ್ಥೆಗಳು, ಮಹಿಳಾ ಸ್ವಸಹಾಯ ಸಂಘಗಳು, ಮೈತ್ರಿ ಸಂಘಗಳು, ವಿದ್ಯಾವಂತ ಉತ್ತಮ ನಡೆತವುಳ್ಳ ಹೆಚ್ಚಿನ ಅವಧಿ ಕಾರಾಗೃಹದಲ್ಲಿ ಕಳೆಯುತ್ತಿರುವ ಅಪರಾಧಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅರೆಕಾಲಿಕ ಕಾನೂನು ಸ್ವಯಂ ಸೇವಕರೆಂದು ನಿರ್ಧರಿಸುವ ಇತರೆ ಯಾವುದೇ ವ್ಯಕ್ತಿಗಳು.

ಜಿಲ್ಲೆಯ ಹಾಗೂ ಆಯಾಯ ತಾಲ್ಲೂಕುಗಳಿಂದ ಗೌರವಧನದ ಮೇರೆಗೆ ನೇಮಕಾತಿಗೆ ಆಸಕ್ತ ಅಭ್ಯರ್ಥಿಗಳಿಂದ ವರ್ಗೀಕರಣದನ್ವಯ ನಿಗಧಿತ ನಮೂನೆಯಲ್ಲಿ, ಇಚ್ಛೆಯ ಪತ್ರವನ್ನು ಒಳಗೊಂಡಂತೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

.....2

| ಕ್ರಮ ಸಂಖ್ಯೆ | ಜಿಲ್ಲಾ / ತಾಲ್ಲೂಕು ಹೆಸರು | ಖಾಲಿ ಇರುವ ಹುದ್ದೆಗಳು |
|---|---|---|
| 1 | ರಾಮನಗರ | 100 |
| 2. | ಚನ್ನಪಟ್ಟಣ | 25 |
| 3. | ಕನಕಪುರ | 25 |
| 4. | ಮಾಗಡಿ | 25 |

**ವಿದ್ಯಾರ್ಹತೆ:**

1) ಅಕ್ಷರಸ್ಥರಿದ್ದು ಕನಿಷ್ಟ ಪಕ್ಷ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು,
2) ವಸ್ತು ಸ್ಥಿತಿಯ ಬಗ್ಗೆ ಹಾಗೂ ಪರಿಸ್ಥಿಯ ವಿಷಯಗಳನ್ನು ಉತ್ತಮವಾಗಿ ಅರ್ಥ ಮಾಡಿಕೊಳ್ಳುವವರಾಗಿರಬೇಕು.
3) ಯಾವುದೇ ಕ್ರಿಮಿನಲ್ ಅಪರಾಧದ ಹಿನ್ನೆಲೆವುಳ್ಳವರಾಗಿರಬಾರದು.

**ಅಭ್ಯರ್ಥಿಗಳು ಅರ್ಜಿಯೊಡನೆ ಸಲ್ಲಿಸಬೇಕಾದ ದಾಖಲಾತಿಗಳು:**

1) ತಮ್ಮ ಸ್ವ-ವಿವರ ಇರುವ ಅರ್ಜಿ, ತಮ್ಮ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಸಲ್ಲಿಸಬೇಕು,
2) ವಿದ್ಯಾರ್ಹತೆಗೆ ಸಂಬಂಧಪಟ್ಟ ದಾಖಲೆಗಳು, ತಾವು ಕಾರ್ಯ ನಿರ್ವಹಿಸಲು ಇಚ್ಛಿಸುವ ಬಗ್ಗೆ ಸ್ವ-ಇಚ್ಛಾ ಪತ್ರ.

**ವಿಶೇಷ ಸೂಚನೆ:**

ಮೇಲ್ಕಂಡ ನೇಮಕಾತಿ ತಾತ್ಕಾಲಿಕವಾಗಿರುತ್ತದೆ, ಯಾವುದೇ ಸಂಬಳ, ವೇತನಗಳು ಇರುವುದಿಲ್ಲ. ಕೇವಲ ಗೌರವಧನದ ಆಧಾರದ ಮೇಲೆ ಮೂರು ವರ್ಷದ ಅವಧಿಗೆ ಮಾತ್ರ ನೇಮಕಾತಿ / ನಿಯೋಜನೆ ಮಾಡಲಾಗುವುದು. ಸಮಿತಿಯ ತೀರ್ಮಾನ ಅಂತಿಮ. ಅಭ್ಯರ್ಥಿಗಳಿಗೆ ಸದರಿ ಹುದ್ದೆಗಳಲ್ಲಿ ಮುಂದುವರೆಸುವ ಬಗ್ಗೆಯಾಗಲಿ, ಖಾಯಂ ಮಾಡಿಕೊಳ್ಳುವ ಬಗ್ಗೆಯಾಗಲಿ ಈ ಪ್ರಾಧಿಕಾರ ಯಾವುದೇ ಆಶ್ವಾಸನೆ ನೀಡುವುದಿಲ್ಲ ಹಾಗೂ ಅಭ್ಯರ್ಥಿಗಳು ಆ ಬಗ್ಗೆ ಯಾವುದೇ ಹಕ್ಕು ಮಂಡಿಸಲು ಅರ್ಹರಾಗಿರುವುದಿಲ್ಲ.

.....3

ತಮ್ಮ ಸ್ವಂತ ಕೈಬರಹದಲ್ಲಿ ಭರ್ತಿ ಮಾಡಿ ಅರ್ಜಿ ಮತ್ತು ಸಂಬಂಧಪಟ್ಟ ದಾಖಲೆಗಳೊಡನೆ ಅಂಚೆ ಮೂಲಕ ಅಥವಾ ಖುದ್ದಾಗಿ "ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯದ ಆವರಣ, ರಾಮನಗರ-562159 ಇಲ್ಲಿಗೆ **ದಿನಾಂಕ:20.07.2024 ರ ಸಂಜೆ:5.00 ಗಂಟೆ ಯೊಳಗಾಗಿ** "ಅರೆಕಾಲಿಕ ಸ್ವಯಂಸೇವಕರ ನೇಮಕಾತಿಗಾಗಿ", ಜಿಲ್ಲಾ / ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಎಂದು ಶೀರ್ಷಿಕೆ ಬರೆದು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಲು ತಿಳಿಸಿದೆ.

B.V. Re... 5/7/24.

**(ಬಿ.ವಿ.ರೇಣುಕ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ
ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,
ರಾಮನಗರ.

# ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ
# ಅಧಿಕಾರೇತರ ಅರೆಕಾಲಿಕ ಸ್ವಯಂ ಸೇವಕರ ನೇಮಕಾತಿ ಹಾಗೂ ತರಬೇತಿಗಾಗಿ ಅರ್ಜಿ.

ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ

## ಸ್ವ-ವಿವರ ನಮೂನೆ

| | | |
|---|---|---|
| 1. | ಹೆಸರು<br>(Name) | |
| 2. | ತಂದೆಯ ಹೆಸರು<br>(Father Name) | |
| 3. | ವಾಸದ ವಿಳಾಸ ಮತ್ತು ದೂರವಾಣಿ ಸಂಖ್ಯೆ<br>(Paramanent Address & Phone Number) | |
| 4. | ಜನ್ಮ ದಿನಾಂಕ:<br>(Date of Birth) | |
| 5. | ವಿದ್ಯಾಭ್ಯಾಸ:<br>(Qualification) | |
| 6. | ವೃತ್ತಿ:<br>(Occupation) | |
| 7. | ಯಾವ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲಾಗಿದೆ (ದಾಖಲಾತಿಗಳ ಜೆರಾಕ್ಸ್ ಪ್ರತಿ ಲಗತ್ತಿಸಿ)<br>(Experience) | |
| 8. | ಇತರೆ ಮಾಹಿತಿ ಇದ್ದಲ್ಲಿ ಬರೆಯಿರಿ<br>(Other Information) | |
| 9. | ಮೊಬೈಲ್ ಸಂಖ್ಯೆ (Mobile Number) | |
| 10. | ಇ-ಮೇಲ್ ಐಡಿ (e-mail ID) | |

ಈ ಮೇಲ್ಕಂಡ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ, ನಾನು ನನ್ನ ಸ್ವ-ಇಚ್ಛೆಯಿಂದ ಯಾವುದೇ ಒತ್ತಡಕ್ಕೊಳಗಾಗದೇ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ/ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಲ್ಲಿ ಅರೆಕಾಲಿಕ ಸ್ವಯಂ ಸೇವಕರಾಗಿ ಕೆಲಸ ನಿರ್ವಹಿಸಲು ಒಪ್ಪಿರುತ್ತೇನೆ.

ಸ್ಥಳ:

ದಿನಾಂಕ: ಅರ್ಜಿದಾರರ ಸಹಿ